**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿಇ/ಇ-ಆಡಳಿತ/ಆಪೋ/2018-19

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 19-06-2018.

ಸುತ್ತೋಲೆ

**ವಿಷಯ:** 2018-19 ಸಾಲಿನ ಪ್ರಥಮ ಪಿಯುಸಿ ದಾಖಲಾತಿ ಮಾಹಿತಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19ನೇ ಸಾಲಿಗೆ ಪದವಿ ಪೂರ್ವ ಶಿಕ್ಷಣದಲ್ಲಿ ಪ್ರಥಮ ಪಿಯುಸಿ ತರಗತಿಗಳಿಗೆ ದಾಖಲಾದ ವಿದ್ಯಾರ್ಥಿಗಳ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ನೀಡಲು ತಿಳಿಸಲಾಗಿದೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನಲ್ಲಿ (www.pue.kar.nic.in) ಅಳವಡಿಸಲಾದ ಆನ್‌ಲೈನ್ ಪೋರ್ಟಲ್‌ನಲ್ಲಿ ಹೊಸ ಕಾಲೇಜಿನವರು ರಿಜಿಸ್ಟರ್ ಮಾಡಿಕೊಂಡು ಲಾಗಿನ್ ಆಗುವುದು ಹಾಗೂ ಈಗಾಗಲೇ ರಿಜಿಸ್ಟರ್ ಮಾಡಿಕೊಂಡ ಕಾಲೇಜಿನವರು ನೇರವಾಗಿ ಲಾಗ್‌ಇನ್ ಆಗಿ ತಮ್ಮ ಎಲ್ಲಾ ವಿದ್ಯಾರ್ಥಿಗಳ ಸಂಪೂರ್ಣ ನಿಖರ ಮಾಹಿತಿಗಳನ್ನು ಭರ್ತಿಮಾಡಿ ದಿನಾಂಕ: 31-08-2018 ರೊಳಗೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ವಿದ್ಯಾರ್ಥಿಯ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಭರ್ತಿಮಾಡಿ ಸಲ್ಲಿಸುವ ಮುಂಚೆ ಪ್ರಾಂಶುಪಾಲರು ನಿಖರ ದಾಖಲೆಗಳೊಂದಿಗೆ ಪರಿಶೀಲಿಸುವುದು ಕಡ್ಡಾಯವಾಗಿದೆ.

ಒಂದು ವೇಳೆ ವಿದ್ಯಾರ್ಥಿಗಳ ಮಾಹಿತಿ ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿ ತಪ್ಪಾಗಿದ್ದರೆ ಪ್ರಾಚಾರ್ಯರು ನೇರವಾಗಿ ಸರಿಪಡಿಸಿ ಸಲ್ಲಿಸುವಂತಿಲ್ಲ. ಆನ್‌ಲೈನ್‌ನಲ್ಲಿ ಸಲ್ಲಿಸುವುದಕ್ಕಿಂತ ಮುನ್ನ ಎಸ್.ಎಸ್.ಎಲ್.ಸಿ ಬೋರ್ಡ್ ನಿಂದ ಸರಿಪಡಿಸಿಕೊಂಡ ನಂತರ ವಿದ್ಯಾರ್ಥಿಯು ದೃಢೀಕೃತ ಪ್ರತಿಯನ್ನು ಸಲ್ಲಿಸಿದ್ದಲ್ಲಿ ಮಾತ್ರ ತಪ್ಪು ಸರಿಪಡಿಸಬಹುದಾಗಿದೆ. ಆದಾಗ್ಯೂ ಮಾಹಿತಿ ಸಲ್ಲಿಕೆ ತಪ್ಪಾದಲ್ಲಿ ನೇರವಾಗಿ ಪ್ರಾಚಾರ್ಯರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.
ದಿನಾಂಕ: 31-08-2018 ನಂತರ ಸಲ್ಲಿಸಿದ ಮಾಹಿತಿಗಳನ್ನು ಯಾವುದೇ ಕಾರಣಕ್ಕೂ ಮಾನ್ಯ ಮಾಡುವುದಿಲ್ಲ.

19/6/18.
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಗೆ,

ಎಲ್ಲಾ ಜಿಲ್ಲಾ ಉಪನಿರ್ದೇಶಕರ ಮುಖಾಂತರ ಪಾಚಾರ್ಯರಿಗೆ-ಮುಂದಿನ ಕ್ರಮಕ್ಕಾಗಿ

ಪ್ರತಿ,

1. ನಿರ್ದೇಶಕರ ಆಪ್ತಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ.
2. ಜಂಟಿ ನಿರ್ದೇಶಕರು(ಶೈಕ್ಷಣಿಕ/ಪರೀಕ್ಷೆ/ಮಾ&ಅ), ಪದವಿ ಪೂರ್ವ ಶಿಕ್ಷಣ ಇಲಾಖೆ.
3. ಕಛೇರಿ ಪ್ರತಿ.